ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 11/12/20

ಪೊಲೀಸ್ ಇಲಾಖೆಗೆ ಪ್ರವೀಣ್ ಸೂದ್ ಸಾರಥಿ

ಬೆಂಗಳೂರು: ರಾಜ್ಯ ಪೊಲೀಸ್ ಮಹಾನಿರ್ದೇಶಕರಾಗಿ (ಡಿಜಿ-ಐಜಿ) ಹಿರಿಯ ಐಪಿಎಸ್ ಅಧಿಕಾರಿ ಪ್ರವೀಣ್ ಸೂದ್ ಶುಕ್ರವಾರ ಅಧಿಕಾರ ವಹಿಸಿಕೊಂಡಿದ್ದಾರೆ. ನಿರ್ಗಮಿತ ಡಿಜಿಪಿ ನೀಲಮಣಿ ಎನ್.ರಾಜು ರಾಜ್ಯ ಪೊಲೀಸ್ ಮಹಾನಿರ್ದೇಶಕರ ಕಚೇರಿಯಲ್ಲಿ ಬೇಟನ್ ನೀಡುವ ಮೂಲಕ ಅಧಿಕಾರ ಹಸ್ತಾಂತರಿಸಿದರು.

ಪ್ರವೀಣ್ ಸೂದ್ (56) ಅವರು ಮುಂದಿನ ನಾಲ್ಕು ವರ್ಷಕ್ಕೂ ಅಧಿಕ ಕಾಲ ರಾಜ್ಯ ಪೊಲೀಸ್ ಇಲಾಖೆಯ ಮುಖ್ಯಸ್ಥರಾಗಿ ಕಾರ್ಯನಿರ್ವಹಿಸಲಿದ್ದಾರೆ. 2024ರ ಮೇ ತಿಂಗಳಲ್ಲಿ ಅವರ ಸೇವಾ ನಿವೃತ್ತಿಯಿದೆ.

ಪೊಲೀಸ್ ಮಹಾನಿರ್ದೇಶಕರ ಹುದ್ದೆಯ ಮೇಲೆ ಸೇವಾ ಹಿರಿತನದ ಆಧಾರದಲ್ಲಿ ಹಿರಿಯ ಐಪಿಎಸ್ ಅಧಿಕಾರಿ ಅಲೋಕ್ ಮೋಹನ್ ಪ್ರಸಾದ್ ಹೆಸರು ಮುಂಚೂಣಿಯಲ್ಲಿತ್ತು. ಆದರೆ, ರಾಜ್ಯಸರ್ಕಾರ ಪ್ರಸಾದ್ ಹೆಸರು ಕೈ ಬಿಟ್ಟು ಪ್ರವೀಣ್ ಸೂದ್‌ಗೆ ಅವಕಾಶ ಕಲ್ಪಿಸಿದೆ. ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಸದ್ಯ ಆಂತರಿಕ ಭದ್ರತಾ ದಳದ ಡಿಜಿಪಿ ಆಗಿರುವ ಎ.ಎಂ ಪ್ರಸಾದ್ ಗೈರು ಹಾಜರಿದ್ದರು. 1985ರ ಬ್ಯಾಚ್‌ನ ಅಧಿಕಾರಿ ಆಗಿರುವ ಪ್ರಸಾದ್ ಅವರು ಸೂದ್ ಅವರಿಗಿಂತ 1 ವರ್ಷ ಸೇವಾ ಹಿರಿತನ ಹೊಂದಿದ್ದರು. ಪ್ರಸಾದ್ ಅವರು ಇದೇ ವರ್ಷ ಅಕ್ಟೋಬರ್‌ಗೆ ಸೇವೆಯಿಂದ ನಿವೃತ್ತರಾಗಲಿದ್ದಾರೆ. ಡಿವೈಎಸ್ಪಿ ಗಣಪತಿ ಆತ್ಮಹತ್ಯೆ ಪ್ರಕರಣದಲ್ಲಿಯೂ ಪ್ರಸಾದ್ ಅವರಿಗೆ ಸಿಐಡಿ ಕ್ಲೀನ್‌ಚಿಟ್ ನೀಡಿತ್ತು. ಈ ಹಿನ್ನೆಲೆಯಲ್ಲಿ ಅವರಿಗೂ ಡಿಜಿ-ಐಜಿಪಿ ಹುದ್ದೆ ಸಿಗುವ ಸಾಧ್ಯತೆಯಿದೆ ಎಂಬ ಮಾತುಗಳು ಕೇಳಬಂದಿದ್ದವು.

ರಾಜ್ಯ ಸರ್ಕಾರದ ನಿರ್ಧಾರ ಪ್ರಶ್ನಿಸಿ ಎ.ಎಂ ಪ್ರಸಾದ್ ನ್ಯಾಯಾಲಯದ ಮೆಟ್ಟಿಲೇರಲು ನಿರ್ಧರಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಈ ಕುರಿತ ಖಚಿತತೆಗೆ ದೂರವಾಣಿ ಮೂಲಕ ಸಂಪರ್ಕಿಸಲು ಯತ್ನಿಸಿದರೂ ಪ್ರಸಾದ್ ಪ್ರತಿಕ್ರಿಯಿಸಲಿಲ್ಲ

ನಿರ್ಗಮಿತ ಡಿಜಿಪಿ ನೀಲಮಣಿ ಎನ್.ರಾಜು ಅವರು ಪ್ರವೀಣ್ ಸೂದ್ ಅವರಿಗೆ ಬೇಟನ್ ನೀಡುವ ಮೂಲಕ ಅಧಿಕಾರ ಹಸ್ತಾಂತರಿಸಿದರು.

- ನೀಲಮಣಿ ಎನ್.ರಾಜು ಅವರಿಂದ ಅಧಿಕಾರ ಹಸ್ತಾಂತರ
- ಸೇವಾ ಹಿರಿತನ ವಂಚಿತ ಎ.ಎಂ. ಪ್ರಸಾದ್, ನ್ಯಾಯಾಲಯದ ಮೆಟ್ಟಿಲೇರಲು ಚಿಂತನೆ?

1986ರ ಬ್ಯಾಚ್‌ನ ಐಪಿಎಸ್ ಅಧಿಕಾರಿ

ಹಿಮಾಚಲ ಪ್ರದೇಶ ಮೂಲದ ಪ್ರವೀಣ್ ಸೂದ್ 1986ರ ಬ್ಯಾಚ್‌ನ ಐಪಿಎಸ್ ಅಧಿಕಾರಿ. ಈ ಹಿಂದೆ ಮೈಸೂರು ನಗರ ಪೊಲೀಸ್ ಆಯುಕ್ತ, ಬೆಂಗಳೂರು ನಗರ ಪೊಲೀಸ್ ಆಯುಕ್ತ, ಸಂಚಾರ ವಿಭಾಗದ ಜಂಟಿ ಆಯುಕ್ತ, ಗೃಹ ಇಲಾಖೆ ಪ್ರಧಾನ ಕಾರ್ಯದರ್ಶಿ, ರಾಜ್ಯ ಆಂತರಿಕ ಭದ್ರತಾ ದಳದ ಡಿಜಿಪಿ, ಸಿಐಡಿಯ ಡಿಜಿಪಿ ಹುದ್ದೆಸೇರಿ ಹಲವು ಮಹತ್ತರ ಹುದ್ದೆಗಳನ್ನು ನಿಭಾಯಿಸಿದ ಹಿರಿಮೆ ಹೊಂದಿದ್ದಾರೆ. ಪೊಲೀಸ್ ಇಲಾಖೆಯ ಅವರ ಸೇವಾ ಅವಧಿಯಲ್ಲಿ ಅತ್ಯುತ್ತಮ ಸೇವೆಗಾಗಿ 1996ರಲ್ಲಿ ಮುಖ್ಯಮಂತ್ರಿಗಳ ಚಿನ್ನದ ಪದಕ, 2002ರಲ್ಲಿ ರಾಷ್ಟ್ರಪತಿಗಳ ವಿಶಿಷ್ಟ ಸೇವಾ ಪದಕ, 2011ರಲ್ಲಿ ರಾಷ್ಟ್ರಪತಿಗಳ ವಿಶೇಷ ಸೇವಾ ಪದಕ ಪಡೆದಿದ್ದಾರೆ. 2006ರಲ್ಲಿ ಮೈಸೂರು ಪೊಲೀಸ್ ಆಯುಕ್ತರಾಗಿದ್ದ ಸಂದರ್ಭದಲ್ಲಿ 'ರಸ್ತೆ ಸುರಕ್ಷತೆ ಸಂಚಾರ ನಿಯಂತ್ರಣ'ಕ್ಕೆ ನೀಡಿದ ಸೇವೆ ಪರಿಗಣಿಸಿ ಪ್ರಿನ್ಸ್ ಮೈಕೆಲ್ ಇಂಟರ್‌ನ್ಯಾಶನಲ್ ರೋಡ್ ಸೇಫ್ಟಿ ಅವಾರ್ಡ್ ಪಡೆದಿದ್ದರು. ಜತೆಗೆ, ಸಂಚಾರ ನಿಯಂತ್ರಣಕ್ಕೆ ವಿನೂತನ ತಂತ್ರಜ್ಞಾನ ಬಳಕೆ ಜಾರಿಕುರಿತ ಸೇವೆಗೆ 2011ರಲ್ಲಿ ಇ-ಗವರ್ನೆನ್ಸ್ ಗೋಲ್ಡ್ ಅವಾರ್ಡ್ ಸ್ವೀಕರಿಸಿದ್ದರು.

ಇಲಾಖೆ ಸೇವೆ ತೃಪ್ತಿ ತಂದಿದೆ: ನೀಲಮಣಿ ಎನ್.ರಾಜು

ಬೆಂಗಳೂರು: 'ಮೂವತ್ತಾರು ವರ್ಷಗಳ ಇಲಾಖೆಯ ಸೇವೆ ತೃಪ್ತಿ ತಂದಿದ್ದು ರಾಜ್ಯದ ಜನತೆ ಹಾಗೂ ಸರ್ಕಾರಕ್ಕೆ ಋಣಿಯಾಗಿರುತ್ತೇನೆ' ಎಂದು ರಾಜ್ಯ ಪೊಲೀಸ್ ಇಲಾಖೆಯ ನಿರ್ಗಮಿತ ಮಹಾನಿರ್ದೇಶಕ ನೀಲಮಣಿ ಎನ್. ರಾಜು ತಿಳಿಸಿದರು.

ರಾಜ್ಯದ ಮೊಟ್ಟಮೊದಲ ಮಹಿಳಾ ಡಿಜಿ-ಐಜಿಪಿ ನೀಲಮಣಿ ಎನ್.ರಾಜು, ಪೊಲೀಸ್ ವಸತಿ ನಿಗಮದ ಪೊಲೀಸ್ ಮಹಾನಿರ್ದೇಶಕ ರಾಘವೇಂದ್ರ ಔರಾದ್ಕರ್, ಗೃಹರಕ್ಷಕ ದಳದ ಡಿಜಿಪಿ ಎಂ.ಎನ್.ರೆಡ್ಡಿ ಶುಕ್ರವಾರ ಸೇವೆಯಿಂದ ನಿವೃತ್ತರಾದರು. ಈ ಹಿನ್ನೆಲೆಯಲ್ಲಿ ಕೋರಮಂಗಲದ ಕೆಎಸ್‌ಆರ್‌ಪಿ ಮೈದಾನದಲ್ಲಿ ಇಲಾಖೆಯಿಂದ ಏರ್ಪಡಿಸಲಾಗಿದ್ದ

ಅಲೋಕ್ ಕುಮಾರ್ ಅವರು ನೀಲಮಣಿ ರಾಜು ಅವರಿಗೆ ಸ್ಮರಣಿಕೆ ನೀಡಿ ಗೌರವಿಸಿದರು. ರಾಘವೇಂದ್ರ ಔರಾದ್ಕರ್, ಎಂ.ಎನ್. ರೆಡ್ಡಿ ಇದ್ದರು.

ಇಲಾಖೆಯ ವತಿಯಿಂದ ಪಥಸಂಚಲನ ನಡೆಸಿ ಗೌರವ ವಂದನೆ ಸಲ್ಲಿಸಲಾಯಿತು. ಈ ವೇಳೆ ಮಾತನಾಡಿದ ನೀಲಮಣಿ ಎನ್.ರಾಜು, ಇಲಾಖೆಯ ಮುಖ್ಯಸ್ಥರಾಗಿ ಜವಾಬ್ದಾರಿಯನ್ನು ಅತ್ಯುತ್ತಮವಾಗಿ ನಿರ್ವಹಿಸಿದ ತೃಪ್ತಿಯಿದೆ. ಹಲವು ಸವಾಲಿನ ಸಂದರ್ಭದಲ್ಲೂ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ ಶಕ್ತಿ ಮೀರಿ ಕೆಲಸ ಮಾಡಿದ್ದಾರೆ. ಚುನಾವಣೆ ಸಂದರ್ಭದಲ್ಲೂ ಭದ್ರತೆ, ಕಾನೂನು ಸುವ್ಯವಸ್ಥೆ ಯಶಸ್ವಿಯಾಗಿ ನಿಭಾಯಿಸಲಾಯಿತು. ಈ ಕಾರ್ಯಕ್ಕೆ ಕೇಂದ್ರ ಚುನಾವಣಾ ಆಯೋಗದ ಪ್ರಶಸ್ತಿ ಕೂಡ ಬಂದಿತ್ತು ಎಂದು ಸ್ಮರಿಸಿದರು. ರಾಘವೇಂದ್ರ ಔರಾದ್ಕರ್ ಮಾತನಾಡಿ, ಪೊಲೀಸರ ವೇತನ ಪರಿಷ್ಕರಣೆ ಸಂಬಂಧ ಅಧ್ಯಯನ ನಡೆಸಿ ವರದಿ ನೀಡಿರುವುದು ಸಾಧನೆ ಎಂದು ಭಾವಿಸುತ್ತೇನೆ. ಈ ವರದಿಯನ್ನು ಸರ್ಕಾರ ಮುಂದಿನ ದಿನಗಳಲ್ಲಿ ಸಂಪೂರ್ಣವಾಗಿ ಜಾರಿಮಾಡುವ ವಿಶ್ವಾಸವಿದೆ ಎಂದರು. ಎಂ.ಎನ್.ರೆಡ್ಡಿ ಮಾತನಾಡಿ, ಸುದೀರ್ಘ ಸೇವೆ ಕುರಿತು ಹೆಮ್ಮೆಯಿದೆ. ಇಲಾಖೆ ಸಿಬ್ಬಂದಿ ನೆರವಿನಿಂದ ಸಂತೋಷದಿಂದ ಕಾರ್ಯನಿರ್ವಹಿಸಿದ್ದೇನೆ ಎಂದರು. ಕಾರ್ಯಕ್ರಮದಲ್ಲಿ ಅಧಿಕಾರಿಗಳು ಹಾಗೂ ಕುಟುಂಬ ವರ್ಗ ಹಾಜರಿತ್ತು. ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.